# ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಜಿಎಂ/1065/2021
ಮಂಡನಾಧಿಕಾರಿಗಳ ಶಾಖೆ ಎ.ಆರ್.ಇ.17

ಬಹುಮಹಡಿಗಳ ಕಟ್ಟಡ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 02/11/2021

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ರಮೇಶ್ ಎಂ. ಜಿ. ಬಿನ್ ಗಣಪತಿ, ಮುಖ್ಯಾಧಿಕಾರಿಗಳು, ಪುರಸಭೆ, ಭಟ್ಕಳ ವಾಸ: ಪುರಸಭೆ ವಸತಿ ಗೃಹ, ಸಾಗರ ರಸ್ತೆ, ಅಂಜುಮನ್ ಕಾಲೇಜ್ ಹತ್ತಿರ, ಭಟ್ಕಳ ರವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೋಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಉತ್ತರ ಕನ್ನಡ ಜಿಲ್ಲೆ (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ, ಶ್ರೀ ರಮೇಶ್ ಎಂ. ಜಿ. ಬಿನ್ ಗಣಪತಿ, ವಯಸ್ಸು 56 ವರ್ಷ, ಉದ್ಯೋಗ: ಮುಖ್ಯಾಧಿಕಾರಿಗಳು, ಪುರಸಭೆ, ಭಟ್ಕಳ ವಾಸ: ಪುರಸಭೆ ವಸತಿ ಗೃಹ, ಸಾಗರ ರಸ್ತೆ, ಅಂಜುಮನ್ ಕಾಲೇಜ್ ಹತ್ತಿರ, ಭಟ್ಕಳ ಇವರನ್ನು (ಇನ್ನು ಮುಂದೆ'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ದೂರುದಾರರಾದ ಶ್ರೀ ಜಗದೀಶ್ ಬಿನ್ ಸೋಮಯ್ಯ ನಾಯ್ಕ, ಮನೆ ನಂ. 21, ಬೆಣಂದೂರು, ಪೋಸ್ಟ್: ಸರ್ಪನಕಟ್ಟಾ, ಭಟ್ಕಳ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ

7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) ದೂರಿನ ಸಂಕ್ಷಿಪ್ತ ವಿವರಣೆ:-

i. ದೂರುದಾರರು ಪ್ಲಂಬಿಂಗ್ ಮತ್ತು ಎಲೆಕ್ಟ್ರಿಕಲ್ ಲೈಸನ್ಸ್ ಗುತ್ತಿಗೆದಾರರಾಗಿದ್ದು, ಸೈಯದ್ ಇಸ್ಮಾಯಿಲ್ ಸಣ್ಣಬು, ನವಾಯತ್ ಕಾಲೋನಿ, ಭಟ್ಕಳ ಇವರು ಭಟ್ಕಳದಲ್ಲಿ ಹೊಸದಾಗಿ ನಿರ್ಮಿಸುತ್ತಿದ್ದ ಮನೆಗೆ ಹೊಸ ನಲ್ಲಿ ಸಂಪರ್ಕ ನೀಡಲು ಅನುಮತಿಗಾಗಿ ದಿ: 23/12/2016 ರಂದು ಮನವಿ ಸಲ್ಲಿಸಿದ್ದು ಈ ಮನವಿ ಮೇರೆಗೆ ಎದುರುದಾರರು ನಲ್ಲಿ ಸಂಪರ್ಕ ನೀಡಲು ರೂ. 4,000/- ಲಂಚದ ಹಣಕ್ಕೆ ಎದುರುದಾರರು ಬೇಡಿಕೆ ಇಟ್ಟಿರುತ್ತಾರೆ. ದೂರುದಾರರಿಗೆ ಲಂಚದ ಹಣ ನೀಡಲು ಇಷ್ಟವಿಲ್ಲದ ಕಾರಣ ಬೇಡಿಕೆ ಇಟ್ಟಿರುವ ಸಂಬಂಧ ದೂರುದಾರರು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಉತ್ತರ ಕನ್ನಡ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಅಧಿಕಾರಿಯವರು ತಮ್ಮ ಠಾಣೆಯ ಗುನ್ನೆ ನಂ. 01/2016 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

ii. ತನಿಖಾಧಿಕಾರಿಗಳು ದಿನಾಂಕ 28/12/2016 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ ಅವರಿಂದ ದೂರಿನ ವಿಷಯವನ್ನು ತಿಳಿದುಕೊಂಡಿರುತ್ತಾರೆ. ನಂತರ ಲಂಚದ ಹಣ ರೂ. 4,000/- ದೂರುದಾರರು ಹಾಜರುಪಡಿಸಿದ್ದು ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆಯಲಾಯಿತು. ಸದರಿ ಹಣಕ್ಕೆ ಪಿನಾಪ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಪಿನಾಪ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ

ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ರಜತ್ ರಮೇಶ ಗೋವೆಕರ, ಉಪ ವಲಯ ಅರಣ್ಯಾಧಿಕಾರಿ, ವಲಯ ಅರಣ್ಯಾಧಿಕಾರಿಗಳ ಕಛೇರಿ, ಕಾಜುಬಾಗ, ಕಾರವಾರ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಗಳು ನೀಡಿದ ಡಿಜಿಟಲ್ ವಾಯ್ಸ್ ರೆಕಾರ್ಡರ್‌ನಲ್ಲಿ ಧ್ವನಿ ಸಂಭಾಷಣೆಯನ್ನು ರೆಕಾರ್ಡ್ ಮಾಡಲು ದೂರುದಾರರಿಗೆ ತಿಳಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ಶರ್ಟಿನ ಜೇಬಿನಿಂದ ಪೆನ್ನನ್ನು ತೆಗೆದು ಬಲ ಕಿವಿಯಲ್ಲಿ ಪೆನ್ ಆಡಿಸುವದರ ಮೂಲಕ ಸೂಚನೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

iii. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ದಿನಾಂಕ 28/12/2016 ರಂದು ಭಟ್ಕಳ ಪುರಸಭೆ ಕಾರ್ಯಾಲಯದಲ್ಲಿ ದೂರುದಾರರು ಮತ್ತು ನೆರಳು ಸಾಕ್ಷಿ ರಜತ್ ತಂದೆ ರಮೇಶ್ ಗೋವೆಕರ್ ಇವರ ಜೊತೆ ಎದುರುದಾರರಿಂದ ರೂ. 4,000/- ಲಂಚದ ಹಣವನ್ನು ನೀಡಿದಾಗ ಎದುರುದಾರರು ಎರಡೂ ಕೈಗಳಿಂದ ಎಣಿಸಿ ಮಡಿಚಿ ಬಲಗೈನಿಂದ ತಾನು ಧರಿಸಿದ್ದ ಪ್ಯಾಂಟಿನ ಬಲಭಾಗದ ಜೇಬಿಗೆ ಹಾಕಿಕೊಂಡರು. ನಂತರ ದೂರುದಾರರು ಹೊರ ಬಂದು ಬಲಗೈಯಿಂದ ಶರ್ಟಿನ ಜೇಬಿನಿಂದ ಪೆನ್ನನ್ನು ತೆಗೆದು ಬಲಕಿವಿಗೆ ಪೆನ್ನನ್ನು ಆಡಿಸುವುದರ ಮೂಲಕ ನಿಗದಿತ ಸೂಚನೆಯನ್ನು ತನಿಖಾಧಿಕಾರಿಯವರಿಗೆ ನೀಡಿದರು.

ತನಿಖಾಧಿಕಾರಿಯವರು ಪಂಚ ಹಾಗೂ ಸಿಬ್ಬಂದಿಯವರೊಂದಿಗೆ ಹಾಜರಾಗಿ ತಮ್ಮ ಪರಿಚಯವನ್ನು ನೀಡಿ ಎಲ್ಲರ ಸಮಕ್ಷಮ ಎದುರುದಾರರು ತಾನು ಧರಿಸಿದ್ದ ಪ್ಯಾಂಟಿನ ಬಲಭಾಗದ ಜೇಬಿನಲ್ಲಿದ್ದ ಪಿನಾಪ್ತಲಿನ್ ಪೌಡರ್ ಲೇಪಿತ ಹಣ ರೂ. 4,000/- ನ್ನು ಹಾಜರುಪಡಿಸಿದ್ದು ಸದರಿ ನೋಟುಗಳ ಮೌಲ್ಯ ನೋಟುಗಳ ನಂಬರ್ ಪ್ರಾಯೋಗಿಕ ಪಂಚನಾಮೆಯಲ್ಲಿ ಬರೆದಂತಹ ನೋಟುಗಳ ನಂಬರಿಗೂ ಮೌಲ್ಯಕ್ಕೂ ತಾಳೆಯಾಗಿದ್ದು ಇರುತ್ತದೆ. ಸದರಿ ಲಂಚದ ಹಣವಾದ 4,000/- ರೂ.ಗಳನ್ನು ಎದುರುದಾರರಿಂದ ಅಮಾನತ್ತು ಪಡಿಸಿಕೊಂಡಿರುತ್ತಾರೆ. ತನಿಖಾಧಿಕಾರಿಯವರು ಎದುರುದಾರರ ಬಲಗೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಅದೇ ರೀತಿ ನಿಮ್ಮ ಎಡಗೈ ಬೆರಳುಗಳನ್ನು ಇನ್ನೊಂದು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಎದುರುದಾರರಿಗೆ ಬೇರೆ ಪ್ಯಾಂಟಿನ ವ್ಯವಸ್ಥೆ ಮಾಡಿ ಆತನು ಧರಿಸಿದ್ದ ಪ್ಯಾಂಟನ್ನು ಬಿಚ್ಚಿಸಿ ಸದರಿ ಪ್ಯಾಂಟಿನ ಬಲಭಾಗದ ಜೇಬನ್ನು ಹೊರಭಾಗಕ್ಕೆ ತೆಗೆದು ಅದನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಸದರಿ ಪ್ಯಾಂಟನ್ನೂ ಸಹ ತನಿಖಾಧಿಕಾರಿಯವರು ಪಂಚರ ಸಮಕ್ಷಮ ಅಮಾನತ್ ಪಡಿಸಿಕೊಂಡಿರುತ್ತಾರೆ. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ನೆರಳು ಸಾಕ್ಷಿ ಶ್ರೀ ರಜತ್ ತಂದೆ ರಮೇಶ್ ಗೋವೆಕರ್, ಸಹ ಪಂಚ ಅವರಿಂದ ಅಲ್ಲಿಯ ನಡುವಳಿಕೆಗಳನ್ನು ತಿಳಿದು ಸವಿಸ್ತಾರ ಜಪ್ತಿ ಪಂಚನಾಮೆ ನಿರ್ವಹಿಸಿ, ದೂರುದಾರರ ಹಾಗೂ ಪಂಚರ ಸಮಕ್ಷಮ ಸದರಿ ಹಣ, ಮುದ್ದೆ ಮಾಲುಗಳನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ತನಿಖಾಧಿಕಾರಿಗಳು ವಶಪಡಿಸಿ ಕೊಂಡಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಬೇಡಿಕೆ ಇಟ್ಟ ಸಂಭಾಷಣೆಯ ಧ್ವನಿ ಮುದ್ರಣವನ್ನು ವಾಯ್ಸ್ ರೆಕಾರ್ಡರ್‌ನಿಂದ ಲ್ಯಾಪ್ ಟ್ಯಾಪ್‌ಗೆ ಹಾಕಿ ಆನ್ ಮಾಡಿ ಕೇಳಿಸಲಾಗಿ ಅದರಲ್ಲಿ ಮುದ್ರಿತವಾಗಿರುವ

ಸಂಭಾಷಣೆಯನ್ನು ಡಿ.ವಿ.ಡಿ.ಗೆ ಹಾಕಿ ಸದರಿ ಡಿ.ವಿ.ಡಿ.ಯನ್ನು ವಶಪಡಿಸಿಕೊಂಡಿರುತ್ತಾರೆ. ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

iv. ಸದರಿ ಹಣದ ಬಗ್ಗೆ ತನಿಖಾಧಿಕಾರಿಯು ಎದುರುದಾರರಿಗೆ ಸಮಜಾಯಿಷಿ ಕೇಳಲಾಗಿ ಅವರು ತಮ್ಮ ಸಮಜಾಯಿಷಿಯಲ್ಲಿ "ದಿನಾಂಕ 28/12/2016 ರಂದು ಮಧ್ಯಾಹ್ನ ಸುಮಾರು 4.15 ಕ್ಕೆ ಕಛೇರಿಯಲ್ಲಿ ಕೆಲಸ ನಿರ್ವಹಿಸುತ್ತಿರುವಾಗ ಯಾರೊಬ್ಬರು ಬಂದು ನನ್ನ ಕೆಲಸ ಮಾಡಿಕೊಡಬೇಕು, ನಾನು ಆವಾಗ ಯಾವ ಕೆಲಸವೆಂದು ಕೇಳಿದಾಗ ಶಬ್ಬೀರ ಬರುತ್ತಾರೆ ಎಲ್ಲವನ್ನು ಹೇಳುತ್ತಾರೆ ಎಂದು ತಿಳಿಸಿದ ನಾನು ನಾಳೆ ಬರುತ್ತೇನೆ ಎಂದು ಹೇಳಿದರು. ಆಯ್ತು ಯಾವ ಕೆಲಸ ಮಾಡಿಕೊಡೋಣ ಎಂದು ಹೇಳಿದ ಆಗ ಅವರು ರೂ. 2,000/- ದ ಎರಡು ನೋಟುಗಳನ್ನು ನನಗೆ ಕೊಟ್ಟರು. ಇದೇ ಇವತ್ತು ನಡೆದ ಘಟನೆ" ಎಂದು ಹಣ ಸ್ವೀಕರಿಸಿದ ಬಗ್ಗೆ ಸಕಾರಾತ್ಮಕ ಲಿಖಿತ ಸಮಜಾಯಿಷಿ ನೀಡಿರುತ್ತಾರೆ.

v. ಧ್ವನಿ ವಿಶ್ಲೇಷಣಾ ವರದಿಯಲ್ಲಿ ಎದುರುದಾರರ ಧ್ವನಿಯೊಂದಿಗೆ ತಾಳೆಯಾಗಿರುವುದು ದೃಢಪಟ್ಟಿರುತ್ತದೆ ಹಾಗೂ ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಫಿನಾಫ್ತಲಿನ್ ಅಂಶ ಇರುವುದು ದೃಢಪಟ್ಟಿರುತ್ತದೆ.

vi. ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಯನ್ನು ದಿನಾಂಕ 11/08/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಯನ್ನು ಪರಿಶೀಲಿಸಲಾಗಿ "ದೂರುದಾರರು ಯಾವುದೇ ಲೈಸನ್ಸ್ ಪುರಸಭೆ ಭಟ್ಕಳದಿಂದ ಹೊಂದಿರುವುದಿಲ್ಲ ಮತ್ತು ಕಂಟ್ರಾಕ್ಟರ್ ಕೆಲಸ ನಿರ್ವಹಿಸಿರುವುದಿಲ್ಲ. ಶ್ರೀ ಸೈಯದ್ ಇಸ್ಮಾಯಿಲ್ ಸಣ್ಣಬ್ಬು, ನವಾಯಿತ್ ಕಾಲೋನಿ, ಭಟ್ಕಳ್ ಇವರು ಯಾವುದೇ ಮನೆ ನಿರ್ಮಿಸುತ್ತಿರಲಿಲ್ಲ. ಸದರಿಯವರು ದಿ: 27/08/1996 ರಂದು ಮರಣ ಹೊಂದಿರುತ್ತಾರೆ. ನಾನು ಯಾವುದೇ ಹಣದ ಬೇಡಿಕೆ

ಇಟ್ಟಿರುವುದಿಲ್ಲ. ದೂರುದಾರರು ಶ್ರೀ ದೀಪಕ್ ಶೆಟ್ಟಿರವರ ಸ್ನೇಹಿತನಾಗಿದ್ದು ದೀಪಕ್ ಶೆಟ್ಟಿರವರು ಸಾರ್ವಜನಿಕರಿಂದ ನಲ್ಲಿ ಸಂಪರ್ಕ ಹಾಗೂ ಯು.ಜಿ.ಡಿ. ಸಂಪರ್ಕ ನೀಡಲು ಪುರಸಭೆಗೆ ಭರಿಸಬೇಕಾದ ಹಣವನ್ನು ಪುರಸಭೆಗೆ ಭರಿಸದೆ 10 ಲಕ್ಷ ರೂಪಾಯಿಗಳಷ್ಟು ಹಣವನ್ನು ದುರುಪಯೋಗ ಪಡಿಸಿಕೊಂಡಿರುತ್ತಾರೆ. ಆದ್ದರಿಂದ ಸದರಿಯವರ ಮೇಲೆ ದಿ: 04-05-2017 ರಂದು ಕಾರವಾರ ಪೋಲೀಸ್ ಠಾಣೆಯಲ್ಲಿ ಕ್ರೈಂ ನಂ. 80/2017 ರಲ್ಲಿ ದೂರನ್ನು ಸಲ್ಲಿಸಿರುವ ಬಗ್ಗೆ ಪ್ರಥಮ ವರ್ತಮಾನ ವರದಿಯ ಜೆರಾಕ್ಸ್ ನಕಲನ್ನು ಹಾಜರುಪಡಿಸಿರುತ್ತೇನೆ. ನನ್ನ ಕರ್ತವ್ಯದಲ್ಲಿ ಯಾವುದೇ ಲೋಪ ಆಗಿರುವುದಿಲ್ಲ. ಆದ್ದರಿಂದ ನನ್ನ ಮೇಲೆ ಶಿಸ್ತು ಕ್ರಮಕ್ಕಾಗಿ ಶಿಫಾರಸ್ಸು ಮಾಡಬಾರದೆಂದು ವಿನಂತಿ" ಎಂದು ಲಿಖಿತ ಸಮಜಾಯಿಷಿ ನೀಡಿರುತ್ತಾರೆ. ಸೈಯದ್ ಇಸ್ಮಾಯಿಲ್ ಸಣ್ಣಬ್ಬು ಇವರ ಮರಣ ಪ್ರಮಾಣ ಪತ್ರವೆಂದು ವ್ಯತಿರಿಕ್ತವಾಗಿ ಸೈಯದ್ ಇಸ್ಮಾಯಿಲ್ ಬರ್ಮಾವರ್ ಇವರ ಮರಣ ಪ್ರಮಾಣಪತ್ರವನ್ನು ಲಗತ್ತಿಸಿರುತ್ತಾರೆ. ಸದರಿಯವರು ಲಂಚದ ಹಣಕ್ಕೆ ಬೇಡಿಕೆ ಇಟ್ಟ ಬಗ್ಗೆ ವಾಯ್ಸ್ ರೆಕಾರ್ಡರ್‌ನಲ್ಲಿ ಮಾತನಾಡಿದ ಸಂಭಾಷಣೆ, ಪಿನಾಪ್ತಲಿನ್ ಪೌಡರ್ ಲೇಪಿತ ಹಣವನ್ನು ಸ್ವೀಕರಿಸಿದ ಬಗ್ಗೆ ರಾಸಾಯನಿಕ ವಿಶ್ಲೇಷಣಾ ವರದಿಯಿಂದ ದೃಢಪಟ್ಟಿರುತ್ತದೆ. ಎದುರುದಾರರು ಜಪ್ತಿ ಮಹಜರ್ ಕಾಲದಲ್ಲಿ ನೀಡಿದ ಸಮಜಾಯಿಷಿಗೂ ಹಾಗೂ ಪರಿವೀಕ್ಷಣಾ ಟಿಪ್ಪಣಿಗೆ ನೀಡಿದ ಸಮಜಾಯಿಷಿಗೂ ವ್ಯತಿರೀಕ್ತವಾಗಿದೆ. ಆದ್ದರಿಂದ ಅವರು ನೀಡಿರುವ ಸಮಜಾಯಿಸಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

3) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿಸುತ್ತದೆ.

4) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ

ಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

5) ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರಿಸದೆ, ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

6) ಆದ್ದರಿಂದ, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i) ರಿಂದ (iii) ರ ಉಲ್ಲಂಘನೆಗಾಗಿ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈ ವರದಿಯ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಉಪಲೋಕಾಯುಕ್ತರಿಗೆ ವಹಿಸಬೇಕೆಂದೂ ಕೋರಿದೆ.

7) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

4/11/21

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಉಪಲೋಕಾಯುಕ್ತರು
ಕರ್ನಾಟಕ ರಾಜ್ಯ, ಬೆಂಗಳೂರು.